ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 4/4/2021

# ಕೋವಿಡ್ ನಿಯಮ ಜಾರಿ: ಸಂಪುಟದಲ್ಲಿ ಗೊಂದಲದ ಆರೋಪ

ಬೆಂಗಳೂರು: ಕೊರೊನಾ ಎರಡನೇ ಅಲೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಜಾರಿ ಮಾಡಿರುವ ಮಾರ್ಗಸೂಚಿಗಳ ಬಗ್ಗೆ ಸಂಪುಟದ ಸಚಿವರಲ್ಲಿಯೇ ಗೊಂದಲ ಇದೆ ಎಂಬ ಮಾತು ಕೇಳಿ ಬರುತ್ತಿವೆ.

ಕಳೆದ ವರ್ಷದ ಕೊರೊನಾ ಲಾಕ್‌ಡೌನ್ ಪರಿಣಾಮವಾಗಿ ಸರ್ಕಾರ ಹಾಗೂ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸಿರುವುದರಿಂದ ಮತ್ತೆ ಅದೇ ರೀತಿಯ ವಾತಾವರಣ ಸೃಷ್ಟಿಸುವ ಯತ್ನ ನಡೆಸಲಾಗುತ್ತಿದೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದ್ದು ಸರ್ಕಾರ ಬಿಗಿ ನಿಯಮ ಜಾರಿಗೊಳಿಸುವ ಬಗ್ಗೆ ಸಂಪುಟದ ಕೆಲವು ಸಚಿವರಿಗೂ ಒಲವಿದ್ದಂತಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.

ಶುಕ್ರವಾರ ಸಂಜೆ ರಾಜ್ಯ ಸರ್ಕಾರ ಹೊರಡಿಸಿರುವ ನಿಯಮಗಳಿಂದ ಚಲನಚಿತ್ರ ರಂಗ, ಜಿಮ್ ಮಾಲೀಕರು, ಪಬ್, ಬಾರ್ ಮಾಲೀಕರು ಸರ್ಕಾರದ ವಿರುದ್ಧ ಬಹಿರಂಗ ಅಸಮಾಧಾನ ಹೊರ ಹಾಕುತ್ತಿದ್ದಾರೆ. ಈ ನಿಯಮಗಳನ್ನು ಜಾರಿ ಮಾಡುವ ಕುರಿತು ಸಂಬಂಧ ಪಟ್ಟ ಇಲಾಖೆಯ ಸಚಿವರ ಜೊತೆ ಆರೋಗ್ಯ ಸಚಿವರು ಸಮಾಲೋಚನೆ ಮಾಡದೇ ತೀರ್ಮಾನ ತೆಗೆದುಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿ ಬರುತ್ತಿದೆ. ಸರ್ಕಾರದ ಈ ನಿರ್ಧಾರದ ಬಗ್ಗೆ ಕೆಲವು ಸಚಿವರು ಪರೋಕ್ಷವಾಗಿ ತಮ್ಮ ಆಪ್ತರ ಬಳಿ ಅಸಮಾಧಾನ ಹೊರ ಹಾಕಿದ್ದಾರೆಂದು ತಿಳಿದು ಬಂದಿದೆ. ಚಲನಚಿತ್ರ ಪ್ರದರ್ಶನಕ್ಕೆ ಚಿತ್ರಮಂದಿರಗಳಲ್ಲಿ ಶೇ.50ರಷ್ಟು ಮಾತ್ರ ಪ್ರೇಕ್ಷಕರಿಗೆ ಅನುಮತಿ ನೀಡುವ ಆದೇಶದ ಕುರಿತು ಸಂಬಂಧ ಪಟ್ಟ ಇಲಾಖೆಯ ಸಚಿವರೊಂದಿಗೆ ಯಾವುದೇ ರೀತಿಯ ಚರ್ಚೆ ನಡೆಸಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ. ಅದೇ ರೀತಿ ಬಾರ್, ಪಬ್‌ಗಳನ್ನು ಬಂದ್ ಮಾಡುವ ಬಗ್ಗೆ ಅಬಕಾರಿ ಸಚಿವರು, ಈಜುಕೊಳ, ಜಿಮ್ ಬಂದ್ ಮಾಡುವ ಬಗ್ಗೆ ಯುವಜನ ಮತ್ತು ಕ್ರೀಡಾ ಇಲಾಖೆ ಸಚಿವರ ಅಭಿಪ್ರಾಯವನ್ನು ಪಡೆದಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.

**ತಜ್ಞರ ಸಮಿತಿ ವರದಿ ಆಧಾರ:** ರಾಜ್ಯ ಸರ್ಕಾರ ಕೊವಿಡ್ ನಿರ್ವಹಣೆ ಕುರಿತು ರಚಿಸಿರುವ ತಜ್ಞರ ಸಮಿತಿ ವರದಿ ಆಧಾರದಲ್ಲಿ ಹೊಸ ನಿಯಮಗಳನ್ನು ಜಾರಿಗೆ ತಂದಿದೆ ಎಂದು ಹೇಳಲಾಗುತ್ತಿದೆ. ತಜ್ಞರ ಸಮಿತಿ ಸಚಿವರೊಬ್ಬರ ನಿರ್ದೇಶನದಂತೆ ಕಾರ್ಯ ನಿರ್ವಹಿಸುತ್ತಿದೆ ಎಂಬ ಆರೋಪವನ್ನು ಸ್ವತಃ ಸಚಿವರೇ ತಮ್ಮ ಆಪ್ತರ ಬಳಿ ಹೇಳಿಕೊಂಡಿದ್ದಾರೆಂದು ತಿಳಿದು ಬಂದಿದೆ. ಈಗ ಮತ್ತೆ ಅದೇ ರೀತಿ ಆದರೆ ಸರ್ಕಾರ ಮತ್ತಷ್ಟು ಮುಜುಗರ ಎದುರಿಸುವಂತಾಗುತ್ತದೆ ಎಂಬ ಅಭಿಪ್ರಾಯವನ್ನು ಹಿರಿಯ ಸಚಿವರುಗಳು ವ್ಯಕ್ತಪಡಿಸಿದ್ದಾರೆ ಎಂದು ತಿಳಿದು ಬಂದಿದೆ. ಸರ್ಕಾರದ ನಿಯಮ ಜಾರಿ ಮಾಡಿರುವ ಬಗ್ಗೆ ಯಡಿಯೂರಪ್ಪ ಅವರ ಗಮನಕ್ಕೆ ಇರಲಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ. ಕಳೆದ ವಾರ ಸಿಎಂ. ಕೋವಿಡ್‌ಗೆ ಸಂಬಂಧ ಪಟ್ಟ ಸಚಿವರೊಂದಿಗೆ ಚರ್ಚೆ ನಡೆಸಿದ ಸಂದರ್ಭದಲ್ಲಿ ಬಿಗಿ ನಿಯಮ ಜಾರಿಗೊಳಿಸುವ ಕುರಿತು ಚರ್ಚೆ ನಡೆಸಲಾಗಿತ್ತೆಂದು ತಿಳಿದು ಬಂದಿದೆ. ಆದರೆ, ಆರ್ಥಿಕ ವಾಗಿ ಯಾವುದೇ ಕ್ಷೇತ್ರದ ಮೇಲೆ ಹೊರೆಯಾಗದಂತೆ ನೋಡಿಕೊಳ್ಳುವ ಬಗ್ಗೆ ತೀರ್ಮಾನಿಸಲಾಗಿತ್ತು ಎಂಬ ಮಾಹಿತಿ ಲಭ್ಯವಾಗಿದೆ. ಶುಕ್ರವಾರ ಬಿಡುಗಡೆಯಾಗಿರುವ ಮಾರ್ಗಸೂಚಿಯ ಬಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಮುಂಚಿತವಾಗಿ ಮಾಹಿತಿ ನೀಡಿರಲಿಲ್ಲ ಎಂದು ಹೇಳಲಾಗುತ್ತಿದೆ.

## ಕೊರೊನಾ ನಿಯಂತ್ರಣಕ್ಕೆ ಮಾರ್ಗಸೂಚಿ ಅನಿವಾರ್ಯ

ಬೆಂಗಳೂರು: ತಾಂತ್ರಿಕ ಸಲಹಾ ಸಮಿತಿ ವರದಿ ಆಧರಿಸಿಯೇ ಮಾರ್ಗಸೂಚಿ ಜಾರಿಗೊಳಿಸಲಾಗಿದ್ದು ಏಕಾಏಕಿ ಜಾರಿಗೆ ತಂದಿಲ್ಲ, ಯಾವುದೇ ಚಟುವಟಿಕೆಯನ್ನು ನಿರ್ಬಂಧಿಸುವ ಉದ್ದೇಶ ಸರ್ಕಾರಕ್ಕಿಲ್ಲ, ಕೋವಿಡ್ ಎರಡನೇ ಅಲೆಯ ಹೊಸ್ತಿಲಲ್ಲಿರುವುದರಿಂದ ಮುನ್ನೆಚ್ಚರಿಕೆ ಕ್ರಮ ಅನಿವಾರ್ಯವಾಗಿದ್ದು ಮಾರ್ಗಸೂಚಿಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಸಚಿವ ಡಾ.ಕೆ.ಸುಧಾಕರ್ ಸ್ಪಷ್ಟಪಡಿಸಿದರು.



ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ನಿಯಂತ್ರಣಕ್ಕಾಗಿ ಮಾರ್ಗಸೂಚಿಗಳನ್ನು ರೂಪಿಸಲಾಗಿದ್ದು ಏ.20ರವರೆಗೆ ಅನ್ವಯವಾಗಲಿವೆ. ಯಾವುದೇ ಆರ್ಥಿಕ ಚಟುವಟಿಕೆ ನಿರ್ಬಂಧಿಸುವುದು ಸರ್ಕಾರದ ಉದ್ದೇಶವಲ್ಲ, ಕೋವಿಡ್ ಎರಡನೇ ಅಲೆ ಹೊಸ್ತಿಲಿನಲ್ಲಿರುವಾಗ ಮುನ್ನೆಚ್ಚರಿಕೆ ಕ್ರಮ ವಹಿಸದೆ ಬೇರೆ ದಾರಿ ಇಲ್ಲ, 45 ವರ್ಷ ಮೀರಿದ ಎಲ್ಲರೂ ಲಸಿಕೆ ಪಡೆಯಬೇಕು. ಗುಂಪು ಗುಂಪಾಗಿ ಸೇರುವುದನ್ನು ಕಡಿಮೆ ಮಾಡಿ ಕಡ್ಡಾಯವಾಗಿ ಮಾಸ್ಕ್ ಧರಿಸಬೇಕೆಂದು ಮನವಿ ಮಾಡಿದರು.

ಸರ್ಕಾರ ಚಿತ್ರಮಂದಿರಗಳಲ್ಲಿ ಶೇ. 50ರಷ್ಟು ಪ್ರೇಕ್ಷಕರ ಮಿತಿ ಹೇರಿರುವುದಕ್ಕೆ ನಟ ಪುನೀತ್ ರಾಜ್‌ಕುಮಾರ್ ಬೇಸರ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಸುಧಾಕರ್, ವಲಯ, ಕ್ಷೇತ್ರವಾರು ಎಲ್ಲರ ಬಗ್ಗೆ ಗೌರವ, ಅಭಿಮಾನವಿದೆ. ಶಾಲೆ, ಜಿಮ್, ಈಜುಕೊಳ, ಮದುವೆ ಸಮಾರಂಭ, ಅಪಾರ್ಟ್‌ಮೆಂಟ್‌ನಲ್ಲಿ ಎಲ್ಲ ಚಟುವಟಿಕೆಗಳಿಗೂ ಅವಕಾಶ ನೀಡಿದರೆ ಹೇಗೆ? ಕೋವಿಡ್ ನಿಯಂತ್ರಣಕ್ಕೆ ಗಂಭೀರ ಕ್ರಮ ಕೈಗೊಂಡಿಲ್ಲ ಎಂಬ ವರದಿಗಳಿವೆ. ಆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮ ಅನಿವಾರ್ಯ ಎಂದು ಸಮರ್ಥಿಸಿಕೊಂಡಿದರು.

**ಬದಲಾವಣೆ ಇಲ್ಲ:** ಸರ್ಕಾರ ಸದ್ಯ ಜಾರಿಗೊಳಿಸಿರುವ ಮಾರ್ಗಸೂಚಿಗಳಲ್ಲಿ ಯಾವುದೇ ಬದಲಾವಣೆ ಇಲ್ಲ, ಕೆಲವರು ಮಾರ್ಗಸೂಚಿಗಳನ್ನು ಮಾರ್ಪಡಿಸುವಂತೆ ಮನವಿ ಮಾಡುತ್ತಿದ್ದಾರೆ. ಆದರೆ ಕೋವಿಡ್ ನಿಯಂತ್ರಣವಾಗದ ಹೊರತು ಮಾರ್ಗಸೂಚಿಯಲ್ಲಿ ಬದಲಾವಣೆ ಇಲ್ಲ, ಬಸ್‌ಗಳಲ್ಲಿ ಹೆಚ್ಚಿನ ಪ್ರಯಾಣಿಕರನ್ನು ಕರೆದೊಯ್ಯುವಂತಿಲ್ಲ, ಆಸನ ಸಾಮರ್ಥ್ಯದಷ್ಟು ಜನರನ್ನಷ್ಟೇ ಕರೆದೊಯ್ಯಬೇಕು. ಈ ಬಗ್ಗೆ ಶುಕ್ರವಾರವೇ ವಿಸ್ತೃತವಾಗಿ ಚರ್ಚಿಸಲಾಗಿದೆ ಎಂದು ಹೇಳಿದರು.